O.S.No. 56/2010 D W - 2

ದಿನಾಂಕ 15.02.2025 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು ಃ ವಾದಿ ಪರ ವಕೀಲರಿಂದ ಃ

ಈ ದಾವೆಯನ್ನು ಯಾರು ಹಾಕಿದ್ದಾರೆ ಎಂದು ನನಗೆ ಗೊತ್ತಿಲ್ಲ, ಏನು ಪರಿಹಾರ ಕೇಳಿದ್ದಾರೆ ಎಂದು ನನಗೆ ಮಾಹಿತಿ ಇಲ್ಲ. ದಾವಾ ಸ್ವತ್ತು ಮೂಲತಃ ಯಾರಿಗೆ ಸೇರಿದ್ದು ಎಂದು ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನ ಸ್ವಾಧೀನದಲ್ಲಿ ಮುಂಚೆ ಯಾರು ಇದ್ದರು ಎಂದು ನನಗೆ ಗೊತ್ತಿಲ್ಲ. ದಾವಾ ಸ್ವತ್ತು 1 ನೇ ಪ್ರತಿವಾದಿಗೆ ಮೂಲತಃ ಸೇರಿದ್ದು ಎಂದರೆ ಗೊತ್ತಿಲ್ಲ. ದಾವಾ ಸ್ವತ್ತಿನಲ್ಲಿ ವಾದಿ , 1 ರಿಂದ 4 ನೇ ಪ್ರತಿವಾದಿಗಳು ಇದ್ದಾರೆ ಎಂದರೆ ಗೊತ್ತಿಲ್ಲ.

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದ ಅಂಶಗಳ ಬಗ್ಗೆ ಗೊತ್ತು. 12.09.2012 ರಂದು ದಾವಾ ಸ್ವತ್ತನ್ನು 6 ನೇ ಪ್ರತಿವಾದಿ 5 ನೇ ಪ್ರತಿವಾದಿಯಿಂದ ಖರೀದಿಸಿದ್ದರು. ನಾನು ಅವರ ಕ್ರಯ ಪತ್ರವನ್ನು ನೋಡಿರುವುದಿಲ್ಲ. 5 ನೇ ಪ್ರತಿವಾದಿ ಯಾರಿಂದ ಸದರಿ ಸ್ವತ್ತನ್ನು ಖರೀದಿಸಿದರು ಎಂದು ನನಗೆ ಗೊತ್ತಿಲ್ಲ. ನಾನು ಬೆಂಗಳೂರು ಮತ್ತು ಎಳವಳ್ಳಿ ಎರಡೂ ಕಡೆ ವಾಸವಾಗಿದ್ದೇನೆ. ದಾವಾ ಸ್ವತ್ತು ಕಬ್ಬಾಳು ರಸ್ತೆಯಲ್ಲಿದೆ. ದಾವಾ ಸ್ವತ್ತಿನ ಪಕ್ಕ ನನ್ನ ಸ್ವತ್ತು ಇಲ್ಲ. 6 ನೇ ಪ್ರತಿವಾದಿ ಮನೆ ಕಟ್ಟಿ ಕೊಂಡಿರುವುದಕ್ಕೆ ನ್ಯಾಯಾಲಯದಲ್ಲಿ ದಾಖಲೆ ನೀಡಿಲ್ಲ. ಅವರ ಮನೆ ಮತ್ತು ಖಾತಾ ನಂಬರ್ ಗೊತ್ತಿಲ್ಲ.

6 ನೇ ಪ್ರತಿವಾದಿ ನನಗೆ ಹಲವು ವರ್ಷಗಳಿಂದ ಪರಿಚಯ. ಅವರು ದೂರದಿಂದ ನನಗೆ ಸಂಬಂಧಿಕರಾಗಬೇಕು ಹಾಗೂ ನನ್ನ ಗೆಳೆಯರು ಸಹ . 6 ನೇ ಪ್ರತಿವಾದಿಯ ಹೇಳಿಕೆಯ ಮೇರೆಗೆ ಸಾಕ್ಷಿ ನೀಡುತ್ತಿದ್ದೇನೆ ಎಂದರೆ ಸರಿ. ನನಗೆ ದಾವಾ ಸ್ವತ್ತಿನ ಬಗ್ಗೆ ಹಾಗೂ ಈ ದಾವೆಯ ಬಗ್ಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ 6 ನೇ ಪ್ರತಿವಾದಿಯ ಮಾತು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 6 ನೇ ಪ್ರತಿವಾದಿ ಕೆನರಾ ಬ್ಯಾಂಕ್ ನಿಂದ ಸಾಲ ಪಡೆದ ಬಗ್ಗೆ ಮಾತ್ರ ನನಗೆ ಮಾಹಿತಿ ಇದೆ. 6 ನೇ ಪ್ರತಿವಾದಿ ನನಗೆ ಆ ಬಗ್ಗೆ ಹೇಳಿದ್ದರು. ದಾವಾ ಸ್ವತ್ತನ್ನು ವಾದಿ ಮತ್ತು 1 , 2

ಮತ್ತು 4 ರವರು ಜಂಟಿಯಾಗಿ ಖರೀದಿಸಿದ್ದರು ಎಂದರೆ ಸರಿಯಲ್ಲ. ಖರೀದಿ ಮಾಡಿದ ನಂತರ ಅವರೇ ಅದರ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿಯಲ್ಲ. ಈಗಲೂ ಸಹ ಅವರೇ ಅದರ ಸ್ವಾಧೀನದಲ್ಲಿದ್ದಾರೆ ಎಂದರೆ ಸಾಕ್ಷಿ 6 ನೇ ಪ್ರತಿವಾದಿ ಸ್ವಾಧೀನದಲ್ಲಿದ್ದಾರೆ ಎಂದು ನುಡಿಯುತ್ತಾರೆ. 6 ನೇ ಪ್ರತಿವಾದಿ ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇಲ್ಲ, ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 6 ನೇ ಪ್ರತಿವಾದಿ ನನ್ನ ಗೆಳತಿ ಹಾಗೂ ಸಂಬಂಧಿಕರಾದ ಕಾರಣ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಈ ದಾವೆಯ ಬಗ್ಗೆ ಸಂಪೂರ್ಣ ಮಾಹಿತಿ ಇಲ್ಲದಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 6 ನೇ ಪ್ರತಿವಾದಿ ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರಕ್ಕೆ ಮಾಹಿತಿ ನೀಡಿದ್ದಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಮುಗಿಯಿತು.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಎರಡನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಕನಕಪುರ